## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 688 (820) |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 12.12.2023 |
| ಉತ್ತರಿಸುವ ಸಚಿವರು | : | ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯಪುರ ಜಿಲ್ಲೆಯಾದ್ಯಂತ ಇರುವ ನಗರ ಯೋಜನಾ ಪ್ರಾಧಿಕಾರಗಳೆಷ್ಟು; | ವಿಜಯಪುರ ಜಿಲ್ಲೆಯಲ್ಲಿ ಯಾವುದೇ ನಗರ ಯೋಜನಾ ಪ್ರಾಧಿಕಾರಗಳು ಇರುವುದಿಲ್ಲ. ಆದರೆ, ಮುದ್ದೇಬಿಹಾಳ, ಸಿಂಧಗಿ, ತಾಳಿಕೋಟೆ, ಬಸವನಬಾಗೇವಾಡಿ ಮತ್ತು ಇಂಡಿ ಪುರಸಭೆಗಳೇ ಪುರಸಭಾ ಯೋಜನಾ ಪ್ರಾಧಿಕಾರಗಳಾಗಿ ಕಾರ್ಯನಿರ್ವಹಿಸುತ್ತಿರುತ್ತವೆ. |
| ಆ) | ವಿಜಯಪುರ ಜಿಲ್ಲೆಯ ಹಲವಾರು ತಾಲ್ಲೂಕುಗಳಲ್ಲಿ ಬಡಾವಣೆಗಳು ಹೆಚ್ಚಾಗುತ್ತಿರುವುದರಿಂದ ಪ್ರತಿ ತಾಲ್ಲೂಕಿನಲ್ಲಿ ನಗರ ಯೋಜನಾ ಪ್ರಾಧಿಕಾರ ಕಚೇರಿಗಳನ್ನು ಪ್ರಾರಂಭಿಸಲಾಗುವುದೇ; | ಸಿಂಧಗಿ ಪಟ್ಟಣಕ್ಕೆ ಪ್ರತ್ಯೇಕ ಯೋಜನಾ ಪ್ರಾಧಿಕಾರ ರಚಿಸುವ ಸಂಬಂಧ ಪ್ರಸ್ತಾವನೆಯು ಸ್ವೀಕೃತವಾಗಿದ್ದು, ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. ಉಳಿದಂತೆ ವಿಜಯಪುರ ಜಿಲ್ಲೆಯ ತಾಲ್ಲೂಕುಗಳಲ್ಲಿ ನಗರ ಯೋಜನಾ ಪ್ರಾಧಿಕಾರದ ಕಚೇರಿಗಳನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |
| ಇ) | ಯಾವ-ಯಾವ ತಾಲ್ಲೂಕುಗಳಲ್ಲಿ ಯೋಜನಾ ಪ್ರಾಧಿಕಾರಗಳನ್ನು ಪ್ರಾರಂಭಿಸಲು ಯೋಚಿಸಲಾಗಿದೆ? (ಸಂಪೂರ್ಣ ವಿವರ ನೀಡುವುದು) | . |

ಕಡತ ಸಂಖ್ಯೆ: ನಅಇ 32 ಎಲ್‌ಸಿಕ್ಯೂ 2023 (ಇ-ಕಡತ)

7/12/2023

(ಬಿ.ಎಸ್. ಸುರೇಶ್)

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು